# ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ,

# 7ನೇ ಮಹಡಿ, ಕಂದಾಯ ಭವನ, ಕೆಂಪೇಗೌಡ ರಸ್ತೆ,

# ಬೆಂಗಳೂರು–560 009.

# ಅಧಿಸೂಚನೆ

**ಸಂಖ್ಯೆ: ಕೆಎಸ್‌ಎಟಿ/ಇಎಸ್‌ಟಿ(1)/ಆರ್‌ಸಿಟಿ–ಸಿಓ/62/2023 ದಿನಾಂಕ: 21.08.2023**

## ನ್ಯಾಯಾಂಗಣಾಧಿಕಾರಿ ಹುದ್ದೆಗಳನ್ನು ಅರ್ಹ ಅಭ್ಯರ್ಥಿಗಳಿಂದ ನೇಮಕಾತಿ ಮಾಡುವ ಬಗ್ಗೆ

## ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 05.10.2023

*******

ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಬೆಂಗಳೂರು, ಇಲ್ಲಿನ **ಉಳಿದ ಮೂಲ ವೃಂದದ 03 ನ್ಯಾಯಾಂಗಣಾಧಿಕಾರಿ ಹುದ್ದೆ**ಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಜಿಗಳನ್ನು ಸಲ್ಲಿಸುವುದಕ್ಕೆ ನಿಗದಿಪಡಿಸಿರುವ ಕೊನೆಯ ದಿನಾಂಕದವರೆಗೂ ಅರ್ಹತೆ ಹೊಂದಿರುವ ಅಭ್ಯರ್ಥಿಗಳಿಂದ ನ್ಯಾಯಮಂಡಳಿಯು ನಿಗದಿಪಡಿಸಿರುವ ಅರ್ಜಿ ನಮೂನೆಯಲ್ಲಿ **(www.ksat.karnataka.gov.in** ಜಾಲತಾಣದಿಂದ ನಕಲಿಳಿಸಬಹುದಾದ ಅರ್ಜಿ ನಮೂನೆ**)** ಅರ್ಜಿಗಳನ್ನು ಆಹ್ವಾನಿಸಿ ಈ ಮೂಲಕ ಅಧಿಸೂಚನೆಯನ್ನು ಹೊರಡಿಸಲಾಗಿದೆ.

1. **ನೇಮಕಾತಿಯ ವಿಧಾನ:**

   ಅಭ್ಯರ್ಥಿಗಳ ಆಯ್ಕೆಯನ್ನು ಕಾಲಕಾಲಕ್ಕೆ ತಿದ್ದುಪಡಿ ಮಾಡಲಾಗಿರುವ ಕರ್ನಾಟಕ ಆಡಳಿತ ನ್ಯಾಯಮಂಡಳಿ (ನೇಮಕಾತಿ) ನಿಯಮಗಳು, 1993 ಇವುಗಳ ಅನುಸಾರವಾಗಿ ಮಾಡಲಾಗುವುದು.

2. **ಕನಿಷ್ಠ ವಿದ್ಯಾರ್ಹತೆ:**

   1. ಅಭ್ಯರ್ಥಿಗಳು ಕಾನೂನು ಪದವಿಯನ್ನು ಪಡೆದಿರಬೇಕು.
   2. ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯ ಅಥವಾ ಆಡಳಿತ ನ್ಯಾಯಮಂಡಳಿ ಅಥವಾ ಜಿಲ್ಲಾ ನ್ಯಾಯಾಲಯಗಳಲ್ಲಿ ವಕೀಲಿ ವೃತ್ತಿ ನಡೆಸುತ್ತಿರಬೇಕು ಮತ್ತು ಹಾಗೆಯೇ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ **ಮೂರು (3) ವರ್ಷಗಳಿಗೂ** ಕಡಿಮೆ ಇಲ್ಲದಂತೆ ವಕೀಲಿ ವೃತ್ತಿ ನಡೆಸಿರಬೇಕು.

**3. ವೇತನ ಶ್ರೇಣಿ:**

ರೂ. 43100 – 1100 – 46400 – 1250 – 53900 – 1450 – 62600 – 1650 – 72500 – 1900 – 83900 ಜೊತೆಗೆ ಕರ್ನಾಟಕ ನಾಗರಿಕ ಸೇವಾ (ಪರಿಷ್ಕೃತ ವೇತನ) ನಿಯಮಗಳು, 2018ರ ಪ್ರಕಾರ ಅನ್ವಯಿಸುವ ಭತ್ಯೆಗಳು.

4. **ಸೇವೆಯ ಪರಿವೀಕ್ಷಣಾ ಅವಧಿ :**

ಅಭ್ಯರ್ಥಿಯು ನೇಮಕಗೊಂಡ ಪಕ್ಷದಲ್ಲಿ ಕರ್ನಾಟಕ ನಾಗರಿಕ ಸೇವಾ (ಪರಿವೀಕ್ಷಣಾ ಅವಧಿ) ನಿಯಮಗಳು, 1977ರ ಪ್ರಕಾರ 2 ವರ್ಷಗಳ ಅವಧಿಗೆ ಅಥವಾ ಅಗತ್ಯವಿದ್ದರೆ ವಿಸ್ತರಿಸಬಹುದಾದ ಅವಧಿಗೆ ಪರಿವೀಕ್ಷಣಾರ್ಥಿಗಳಾಗಿರುತ್ತಾರೆ.

**5. ವಯೋಮಿತಿ:**

ಅ) ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಕೊನೆಯ ದಿನಾಂಕದಂದು ಎಲ್ಲಾ ಪ್ರವರ್ಗದ ಅಭ್ಯರ್ಥಿಗಳು ಕನಿಷ್ಠ 25 ವರ್ಷದವರಾಗಿರಬೇಕು ಮತ್ತು ಗರಿಷ್ಠ ವಯೋಮಿತಿ ಈ ಕೆಳಕಂಡಂತೆ ಇರತಕ್ಕದ್ದು.

(ಎ) ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡ ಅಥವಾ ಇತರೇ ಹಿಂದುಳಿದ ಜಾತಿಗಳ ಪ್ರವರ್ಗ–I ಕ್ಕೆ ಸೇರಿದ ಪಕ್ಷದಲ್ಲಿ ಅವರಿಗೆ ಗರಿಷ್ಠ 42 ವರ್ಷ ವಯಸ್ಸು ಮೀರಿರಬಾರದು.

(ಬಿ) ಇತರೇ ಹಿಂದುಳಿದ ವರ್ಗಗಳ ಪ್ರವರ್ಗ–II ಎ ಅಥವಾ IIಬಿ ಅಥವಾ IIIಎ ಅಥವಾ IIIಬಿ ಗೆ ಸೇರಿದ್ದಲ್ಲಿ ಗರಿಷ್ಠ 40 ವರ್ಷ ವಯಸ್ಸು ಮೀರಿರಬಾರದು; ಮತ್ತು

(ಸಿ) ಇತರೇ ಅಭ್ಯರ್ಥಿಗಳಿಗೆ 37 ವರ್ಷ ವಯಸ್ಸು ಮೀರಿರಬಾರದು.

ಆ) ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ 6ನೇ ನಿಯಮದ ಅನುಸಾರ ಈ ಕೆಳಗಿನ ಸಂದರ್ಭಗಳಲ್ಲಿ, ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಸಡಿಲಿಸಲಾಗುವುದು.

(i) ಮಾಜಿ ಸೈನಿಕರಿಗೆ, ಕೇಂದ್ರ ಸಶಸ್ತ್ರ ಪಡೆಯಲ್ಲಿ ಅವರು ಸೇವೆ ಸಲ್ಲಿಸಿದ ಅವಧಿಯ ವರ್ಷಗಳ ಜೊತೆಗೆ ಮೂರು ವರ್ಷಗಳು ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

(ii) ಅಭ್ಯರ್ಥಿಯು ದೈಹಿಕ ಅಂಗವಿಕಲತೆ ಹೊಂದಿರುವ ಸಂದರ್ಭದಲ್ಲಿ ಹತ್ತು ವರ್ಷಗಳ ವಯೋಮಿತಿ ಸಡಿಲಿಕೆ ಇರುತ್ತದೆ.

(iii) ಅಭ್ಯರ್ಥಿಯು ವಿಧವೆಯಾಗಿರುವ ಸಂದರ್ಭದಲ್ಲಿ ಹತ್ತು ವರ್ಷಗಳ ವಯೋಮಿತಿ ಸಡಿಲಿಕೆ ಇರುತ್ತದೆ.

ಇ) ಕನಿಷ್ಠ ಮತ್ತು ಗರಿಷ್ಠ ವಯೋಮಿತಿಯು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕವನ್ನು ಆಧರಿಸಿರುತ್ತದೆ.

**6. ಹುದ್ದೆಗಳ ವರ್ಗೀಕರಣ:**

**ಉಳಿಕೆ ಮೂಲ ವೃಂದದ ಹುದ್ದೆಗಳು:**

| | | |
|---|---|---|
| 1) | **ಪರಿಶಿಷ್ಠ ಜಾತಿ (ಇತರೆ)** | 1 |
| 2) | **ಸಾಮಾನ್ಯ ಅರ್ಹತೆ(ಇತರೆ)** | 1 |
| 3) | **ಪರಿಶಿಷ್ಟ ಪಂಗಡ (ಇತರೆ)** | 1 |
| | **ಒಟ್ಟು** | **3** |

*__ಸೂಚನೆ:__ ಎರಡು ಹುದ್ದೆಗಳು ಈಗಾಗಲೇ ಖಾಲಿ ಇದ್ದು, ದಿನಾಂಕ: **01.02.2024** ರಂದು ಮತ್ತೊಂದು ಹುದ್ದೆಯು ತೆರವಾಗಲಿದ್ದು, ಮೂರು ಹುದ್ದೆಗಳ ನೇರ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಲಾಗಿರುವುದರಿಂದ ಆಯ್ಕೆಪಟ್ಟಿಯಲ್ಲಿ ಮೂರನೇ ಸ್ಥಾನ ಗಳಿಸುವ ಅಭ್ಯರ್ಥಿಗೆ 01.02.2024ರ ನಂತರವೇ ನೇಮಕಾತಿ ಆದೇಶ ಹೊರಡಿಸಲಾಗುವುದು.*

**7. ಆಯ್ಕೆ ವಿಧಾನ:**

ನ್ಯಾಯಾಂಗಣಾಧಿಕಾರಿ ಹುದ್ದೆಯ ಆಯ್ಕೆಯನ್ನು ಅಭ್ಯರ್ಥಿಗಳು ಕೆಳಕಂಡ ಲಿಖಿತ ಪರೀಕ್ಷೆ ಮತ್ತು ಮೌಖಿಕ ಸಂದರ್ಶನದಲ್ಲಿ ತೋರಿದ ಸಾಮರ್ಥ್ಯದ ಆಧಾರದ ಮೇಲೆ ಮಾಡಲಾಗುವುದು.

**(1) ಪ್ರಶ್ನೆ ಪತ್ರಿಕೆ– I:**

**(ಗರಿಷ್ಠ ಅಂಕಗಳು–100) (ಸಮಯ: 3 ಗಂಟೆಗಳು)**

**ಪಠ್ಯಕ್ರಮಗಳು:–**

(i) ಭಾರತೀಯ ಸಂವಿಧಾನ – ಭಾರತೀಯ ಸಂವಿಧಾನದ ಪ್ರಧಾನ ಅಂಶಗಳು/ಮೂಲಭೂತ ಹಕ್ಕುಗಳು, ರಾಜ್ಯ ನೀತಿ ನಿರ್ದೇಶಕ ತತ್ವಗಳು ಮತ್ತು ಮೂಲಭೂತ ಕರ್ತವ್ಯಗಳು/ಮಾನ್ಯ ರಾಷ್ಟ್ರಪತಿ ಮತ್ತು ರಾಜ್ಯಪಾಲರುಗಳ ಸಾಂವಿಧಾನಿಕ ಸ್ಥಾನ ಮತ್ತು ಅವರುಗಳ ಅಧಿಕಾರಗಳು; ಮತ್ತು

(ii) ಕೇಂದ್ರ ಮತ್ತು ರಾಜ್ಯಗಳಡಿಯಲ್ಲಿ ಬರುವ ಸೇವೆಗಳಿಗೆ ಸಂಬಂಧಿಸಿದಂತೆ ಸರ್ವೋಚ್ಚ ನ್ಯಾಯಾಲಯ ಮತ್ತು ಉಚ್ಚನ್ಯಾಯಾಲಯಗಳ ನ್ಯಾಯವ್ಯಾಪ್ತಿ.

**(2) ಪ್ರಶ್ನೆ ಪತ್ರಿಕೆ–II:**

**(ಗರಿಷ್ಠ ಅಂಕಗಳು–100) (ಸಮಯ: 3 ಗಂಟೆಗಳು)**

**ಪಠ್ಯಕ್ರಮಗಳು :–**

i. ಆಡಳಿತ ನ್ಯಾಯಮಂಡಳಿಗಳ ಕಾಯಿದೆ 1985 ರಡಿಯಲ್ಲಿನ ಆಡಳಿತ ನ್ಯಾಯಮಂಡಳಿಯ ಪ್ರಮುಖ ಅಂಶಗಳು/ಲಕ್ಷಣಗಳು, ಭಾರತದ ಎಲ್ಲಾ ಆಡಳಿತ ನ್ಯಾಯಮಂಡಳಿಗಳ ಅಧಿಕಾರ ಮತ್ತು ವ್ಯಾಪ್ತಿ.

ii. ಕರ್ನಾಟಕ ಆಡಳಿತ ನ್ಯಾಯಮಂಡಳಿ (ಪ್ರೊಸೀಜರ್) ನಿಯಮಗಳು, 1986.

iii. ಕರ್ನಾಟಕ ಆಡಳಿತ ನ್ಯಾಯಮಂಡಳಿ ರೂಲ್ಸ್ ಅಫ್ ಪ್ರ್ಯಾಕ್ಟೀಸ್, 1990.

iv. ಕರ್ನಾಟಕ ಆಡಳಿತ ನ್ಯಾಯಮಂಡಳಿ (ಕಂಟೆಂಪ್ಟ್ ಆಫ್ ಟ್ರಿಬ್ಯೂನಲ್) ನಿಯಮಗಳು, 1987.

v. ಕರ್ನಾಟಕ ಆಡಳಿತ ನ್ಯಾಯಮಂಡಳಿ (ಕೇವಿಯೇಟ್) ರೆಗ್ಯೂಲೇಷನ್ಸ್, 1987.

vi. ಕರ್ನಾಟಕ ಆಡಳಿತ ನ್ಯಾಯಮಂಡಳಿ (ರೀಫಂಡ್ ಆಫ್ ಕೋರ್ಟ್ ಫೀ) ರೆಗ್ಯೂಲೇಷನ್ಸ್, 1990.

vii. ಕರ್ನಾಟಕ ಕೋರ್ಟ್ ಫೀ ಮತ್ತು ಸೂಟ್ಸ್ ವ್ಯಾಲ್ಯೂಯೇಷನ್ (ತಿದ್ದುಪಡಿ) ಕಾಯಿದೆ 1988; ಮತ್ತು

viii. ಕರ್ನಾಟಕ ಆಡಳಿತ ನ್ಯಾಯಮಂಡಳಿ (ರಿವ್ಯೂ ಅಪ್ಲಿಕೇಷನ್) ರೆಗ್ಯೂಲೇಷನ್ಸ್, 1994.

**(3) ಮೌಖಿಕ ಸಂದರ್ಶನ 25 ಅಂಕಗಳಿಗೆ:**

(4) ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ಮತ್ತು ಮೌಖಿಕ ಸಂದರ್ಶನದಲ್ಲಿ ಗಳಿಸಿದ ಒಟ್ಟಾರೆ ಶೇಕಡಾವಾರು ಅಂಕಗಳ ಆಧಾರದ ಮೇಲೆ ಅಧಿಸೂಚಿಸಿರುವ ಒಟ್ಟು ಹುದ್ದೆಗಳಷ್ಟೇ ಸಂಖ್ಯೆಯ ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ನೇಮಕಾತಿ ಪ್ರಾಧಿಕಾರವು ಸಿದ್ಧಪಡಿಸುತ್ತದೆ. ಅಂತಿಮ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಿದ ರೀತಿಯಲ್ಲಿಯೇ ಅಂತಿಮ ಆಯ್ಕೆ ಪಟ್ಟಿಯ ಶೇಕಡ 10% ರಷ್ಟು ಸಂಖ್ಯೆಯನ್ನು ಮೀರದೆ ನೇಮಕಾತಿ ಪ್ರಾಧಿಕಾರವು ಹೆಚ್ಚುವರಿ ಆಯ್ಕೆ ಪಟ್ಟಿಯನ್ನೂ ಸಹ ಸಿದ್ಧಪಡಿಸುತ್ತದೆ. ಅಂತಿಮ ಆಯ್ಕೆ ಪಟ್ಟಿಯಲ್ಲಿನ ಅಭ್ಯರ್ಥಿಗಳು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೇ ಇದ್ದಲ್ಲಿ, ಹೆಚ್ಚುವರಿ ಆಯ್ಕೆ ಪಟ್ಟಿಯಲ್ಲಿನ ಅದೇ ಪ್ರವರ್ಗದ ಅಭ್ಯರ್ಥಿಗಳನ್ನು ನೇಮಕ ಮಾಡಬಹುದಾಗಿರುತ್ತದೆ. ಅಂತಿಮ ಆಯ್ಕೆ ಪಟ್ಟಿ ಹಾಗೂ ಹೆಚ್ಚುವರಿ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಹೆಸರುಗಳನ್ನು ಅಧಿಕೃತ ರಾಜ್ಯ ಪತ್ರದಲ್ಲಿ/ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸಲಾಗುವುದು. ಅಂತೆಯೇ ಸಂಬಂಧಿಸಿದ ಅಭ್ಯರ್ಥಿಗಳಿಗೆ ಮಾಹಿತಿ ನೀಡುವುದರೊಂದಿಗೆ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ ಕಚೇರಿಯ ಸೂಚನಾ ಫಲಕದಲ್ಲೂ ಸಹ ಪ್ರಕಟಿಸಲಾಗುವುದು.

(5) ಅಂತಿಮ ಆಯ್ಕೆ ಪಟ್ಟಿಯಲ್ಲಿ ಸೇರ್ಪಡೆಯಾದ ಅಭ್ಯರ್ಥಿಗಳನ್ನು, ಆಯ್ಕೆ ಪಟ್ಟಿಯಲ್ಲಿ ಅವರುಗಳ ಹೆಸರುಗಳನ್ನು ಪ್ರಕಟಿಸಿದ ಕ್ರಮದಲ್ಲಿರುವಂತೆಯೇ ಅಭ್ಯರ್ಥಿಗಳು ಸಂಬಂಧಪಟ್ಟ ಹುದ್ದೆಗೆ ನೇಮಕಾತಿ ಹೊಂದಲು ಎಲ್ಲಾ ರೀತಿಯ ವಿಚಾರಣೆಯಿಂದಲೂ ತೃಪ್ತಿಕರ ಎಂದೆನಿಸಿದ್ದಲ್ಲಿ ನೇಮಕಾತಿ ಪ್ರಾಧಿಕಾರವು ಸದರಿ ಹುದ್ದೆಗೆ ನೇಮಕ ಮಾಡಬಹುದಾಗಿರುತ್ತದೆ.

(6) ಹೆಚ್ಚುವರಿ ಆಯ್ಕೆ ಪಟ್ಟಿಯು ಅಂತಿಮ ಆಯ್ಕೆ ಪಟ್ಟಿಯಲ್ಲಿ ಸೇರದ, ಅಧಿಸೂಚಿಸಿದ ಪ್ರತಿಯೊಂದು ಮೀಸಲಾತಿ ಪ್ರವರ್ಗ (ಲಂಬಾಂತರ ಮತ್ತು ಸಮಾನಾಂತರ) (Vertical and Horizontal) ಕ್ಕೆ ಸೇರಿದ ಕನಿಷ್ಠ ಒಬ್ಬ ಅಭ್ಯರ್ಥಿಯನ್ನು ಒಳಗೊಂಡಿರುತ್ತದೆ. ಆದರೆ, ಅಂತಿಮ ಆಯ್ಕೆ ಪಟ್ಟಿಯಲ್ಲಿನ ನೇಮಕಾತಿ ಹೊಂದುವ ಅಭ್ಯರ್ಥಿಗಳ ಹಾಗೂ ಹೆಚ್ಚುವರಿ ಪಟ್ಟಿಯಲ್ಲಿನ ಅಭ್ಯರ್ಥಿಗಳ ಸಂಖ್ಯೆಯು ಅಧಿಸೂಚಿಸಿದ ಒಟ್ಟು ಹುದ್ದೆಗಳ ಸಂಖ್ಯೆಯನ್ನು ಮೀರಿರುವುದಿಲ್ಲ. ಪ್ರಕಟಿಸಲಾದ ಹೆಚ್ಚುವರಿ ಆಯ್ಕೆ ಪಟ್ಟಿಯು ಪ್ರಕಟಗೊಂಡ ದಿನಾಂಕದಿಂದ ಒಂದು ವರ್ಷದವರೆಗೆ ಅಥವಾ ಮುಂದಿನ ನೇಮಕಾತಿಯ ಆಯ್ಕೆ ಪಟ್ಟಿ ಪ್ರಕಟಗೊಳ್ಳುವವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಚಾಲ್ತಿಯಲ್ಲಿರುತ್ತದೆ.

**8. ಅರ್ಜಿ ಸಲ್ಲಿಸುವ ವಿಧಾನ:**

ಎ) ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ ಅಧಿಕೃತ ಜಾಲತಾಣ **www.ksat.karnataka.gov.in** ನಿಂದ ಡೌನ್ ಲೋಡ್ ಮಾಡಿಕೊಂಡ ನಿಗದಿತ ಅರ್ಜಿ ನಮೂನೆಯಲ್ಲೇ ಅರ್ಜಿ ಸಲ್ಲಿಸತಕ್ಕದ್ದು.

ಬಿ) ಅರ್ಜಿ ನಮೂನೆಯು ಆಡಳಿತ ನ್ಯಾಯಮಂಡಳಿಯು ನಿಗದಿಪಡಿಸಿರುವ ನಮೂನೆಯಲ್ಲಿಯೇ ಇರತಕ್ಕದ್ದು ಮತ್ತು ಸದರಿ ಅರ್ಜಿಯಲ್ಲಿ ತಿಳಿಸಿರುವ ಸೂಚನೆಗಳ ರೀತಿಯಲ್ಲಿಯೇ ಅರ್ಜಿ ಸಲ್ಲಿಸತಕ್ಕದ್ದು ಮತ್ತು ಬೇರೆ ನಮೂನೆ ಅಥವಾ ಕೈಬರಹದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಸಿ) ಭರ್ತಿ ಮಾಡಿದ ಅರ್ಜಿಗಳನ್ನು ಅಭ್ಯರ್ಥಿಗಳು ಖುದ್ದಾಗಿ ಅಥವಾ ಅಂಚೆ ಮೂಲಕ ನಿಗದಿತ ದಿನಾಂಕ ಮತ್ತು ಸಮಯದೊಳಗೆ ಈ ಕಚೇರಿಗೆ ತಲುಪುವಂತೆ ಸಲ್ಲಿಸತಕ್ಕದ್ದು.

ಡಿ) ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ: **05.10.2023** (ಸಂಜೆ 05.30 ಗಂಟೆಯೊಳಗೆ). ತದನಂತರ ಸ್ವೀಕರಿಸಲ್ಪಡುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಒಂದು ವೇಳೆ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ, ಆ ದಿನಾಂಕದ ಮಾರನೆಯ ಕೆಲಸದ ದಿನವು ಅರ್ಜಿ ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

**9. ಲಿಖಿತ ಪರೀಕ್ಷಾ ಶುಲ್ಕ:**

ಸಾಮಾನ್ಯ ಅರ್ಹತೆ ಮತ್ತು ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳು **ರೂ.800/–** (ಎಂಟು ನೂರು ರೂಪಾಯಿಗಳು ಮಾತ್ರ) ಹಾಗೂ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡ/ಪ್ರವರ್ಗ–1 ಮತ್ತು ಅಂಗವಿಕಲ ಅಭ್ಯರ್ಥಿಗಳು **ರೂ.400/–** (ನಾಲ್ಕು ನೂರು ರೂಪಾಯಿಗಳು ಮಾತ್ರ) ಗಳ ಲಿಖಿತ ಪರೀಕ್ಷಾ ಶುಲ್ಕವನ್ನು ಪಾವತಿಸತಕ್ಕದ್ದು ಮತ್ತು ಅದನ್ನು ಡಿ.ಡಿ. ಅಥವಾ ಐಪಿಒ ಮುಖಾಂತರ **Registrar, Karnataka State Administrative Tribunal, Bengaluru** ಇವರ ಹೆಸರಿಗೆ ಬೆಂಗಳೂರಿನಲ್ಲಿ ಪಾವತಿಯಾಗುವಂತೆ (**payable at Bengaluru**) ಪಡೆದು ಅರ್ಜಿಯೊಂದಿಗೆ ಲಗತ್ತಿಸಿ ಸಲ್ಲಿಸತಕ್ಕದ್ದು.

**10. ಇತರೆ ಷರತ್ತುಗಳು:**

A. ಒಮ್ಮೆ ಪಾವತಿಸಲಾದ ಪರೀಕ್ಷಾ ಶುಲ್ಕವನ್ನು ಯಾವುದೇ ಸಂದರ್ಭದಲ್ಲೂ ಹಿಂತಿರುಗಿಸಲಾಗುವುದಿಲ್ಲ.

B. ಲಿಖಿತ ಪರೀಕ್ಷೆ ಮತ್ತು ಮೌಖಿಕ ಸಂದರ್ಶನಕ್ಕೆ ಕರೆಯಲಾಗುವ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಹಾಜರಾಗತಕ್ಕದ್ದು.

C. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಪ್ರವರ್ಗ– I/ II ಎ/ II ಬಿ / III ಎ / III ಬಿ ಅಡಿಯಲ್ಲಿ ಮೀಸಲಾತಿಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು, ಕರ್ನಾಟಕ ಸರ್ಕಾರವು ನಿಗದಿಪಡಿಸಿರುವ ನಮೂನೆಯಲ್ಲಿ ಮತ್ತು ಸಕ್ಷಮ ಪ್ರಾಧಿಕಾರವು ನೀಡಿದ ಪ್ರಮಾಣ ಪತ್ರವನ್ನು ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ತಪ್ಪದೇ ಹಾಜರು ಪಡಿಸುವುದು.

D. ವಿಕಲಚೇತನ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರವು ನೀಡಿದ ಪ್ರಮಾಣ ಪತ್ರವನ್ನು ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ತಪ್ಪದೇ ಹಾಜರು ಪಡಿಸುವುದು.

E. ಮಾಜಿ ಸೈನಿಕ ವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಮಿಲಿಟರಿ ಸೇವೆಯಿಂದ ಬಿಡುಗಡೆ ಮಾಡಲಾದ ಅಥವಾ ವಿಮುಕ್ತಿಗೊಳಿಸಿದ ಪ್ರಮಾಣ ಪತ್ರವನ್ನು ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ತಪ್ಪದೇ ಹಾಜರು ಪಡಿಸುವುದು.

F. ಅಭ್ಯರ್ಥಿಯು ವಕೀಲಿ ವೃತ್ತಿ ನಡೆಸುತ್ತಿರುವ ಬಗ್ಗೆ ಸಂಬಂಧಪಟ್ಟ ನ್ಯಾಯಾಲಯ ಅಥವಾ ನ್ಯಾಯಮಂಡಳಿಗಳ ನೇಮಿಸಿದ/ಸಕ್ಷಮ ಪ್ರಾಧಿಕಾರದಿಂದ ವಕೀಲಿ ವೃತ್ತಿಯನ್ನು ನಡೆಸಿದ ಕಾಲಾವಧಿಯನ್ನೊಳಗೊಂಡ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು ಮತ್ತು ಅರ್ಜಿಯನ್ನು ಸಲ್ಲಿಸುವ ದಿನಾಂಕದಂದು ಕನಿಷ್ಠ ಮೂರು (3) ವರ್ಷಗಳು ವಕೀಲಿ ವೃತ್ತಿಯನ್ನು ನಡೆಸಿರತಕ್ಕದ್ದು.

G ಅಭ್ಯರ್ಥಿಯು ಎರಡು ಉತ್ತಮ ನಡತೆಯ ಅಂದರೆ ಒಂದು ಅವನು/ಅವಳು ಓದಿದ ಸಂಸ್ಥೆ/ಕಾಲೇಜಿನ ಪ್ರಾಂಶುಪಾಲರಿಂದ ವಿದ್ಯಾಭ್ಯಾಸದ ವಿವರಗಳೊಂದಿಗೆ ಪಡೆದ ಮತ್ತು ಇನ್ನೊಂದು ಅವನು/ಅವಳು ಚೆನ್ನಾಗಿ ಪರಿಚಯವಿರುವ ಹಾಗೂ ಸಂಬಂಧಿಯಾಗಿರದ ಗೌರವಾನ್ವಿತ ವ್ಯಕ್ತಿಯಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. ಸದರಿ ಪ್ರಮಾಣ ಪತ್ರಗಳನ್ನು ದಾಖಲಾತಿಗಳ ಪರಿಶೀಲನೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

H ಅಭ್ಯರ್ಥಿಗಳು ಶೈಕ್ಷಣಿಕ ವಿದ್ಯಾರ್ಹತೆಗೆ ಸಂಬಂಧಿಸಿದ ಅಂದರೆ, ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ, ಗುರುತಿನ ಪತ್ರ, ಪದವಿ, ಕಾನೂನು ಪದವಿಗಳ ಅಂಕಪಟ್ಟಿಗಳು, ಘಟಿಕೋತ್ಸವ ಪ್ರಮಾಣ ಪತ್ರಗಳು ಮತ್ತು ಜಾತಿ ಹಾಗೂ ಅಂಗವಿಕಲ, ಮಾಜಿ ಸೈನಿಕ ಮತ್ತು ವಿಧವೆ ಮುಂತಾದ ಮೀಸಲಾತಿಯ ಪ್ರಮಾಣ ಪತ್ರಗಳ ಛಾಯಾ ಪ್ರತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸತಕ್ಕದ್ದು ಮತ್ತು ಮೌಖಿಕ ಸಂದರ್ಶನದ ಸಮಯದಲ್ಲಿ ಕರೆಯಲ್ಪಡುವ ದಾಖಲೆಗಳ ಪರಿಶೀಲನೆಗೆ ಈ ಎಲ್ಲಾ ದಾಖಲೆಗಳ ಮೂಲ ಪ್ರಮಾಣ ಪತ್ರಗಳು ಹಾಗೂ ಒಂದು ಜೊತೆ ಛಾಯಾ ಪ್ರತಿಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು.

I. ನ್ಯಾಯಾಂಗಣಾಧಿಕಾರಿ ಹುದ್ದೆಗೆ ನೇಮಕಗೊಂಡ ಅಭ್ಯರ್ಥಿಗಳನ್ನು ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ ಬೆಂಗಳೂರಿನ ಪ್ರಧಾನ ಪೀಠ/ ಬೆಳಗಾವಿ ಪೀಠ/ ಕಲಬುರಗಿ ಪೀಠಗಳಿಗೆ ನಿಯೋಜಿಸಬಹುದಾಗಿರುತ್ತದೆ.

J. ಅಭ್ಯರ್ಥಿಯು ಅರ್ಜಿಯಲ್ಲಿ ಯಾವುದೇ ತಪ್ಪು ಮಾಹಿತಿಯನ್ನು ನೀಡಿರುವುದು ಕಂಡುಬಂದಲ್ಲಿ, ಆಗ ಅವನ/ಅವಳ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು.

**11. ನೇಮಕಾತಿಗೆ ಅನರ್ಹತೆಗಳು:**

ಈ ಕೆಳಗೆ ತಿಳಿಸಿರುವ ಯಾವುದೇ ವ್ಯಕ್ತಿಯು ನೇಮಕಾತಿಗೆ ಅರ್ಹರಿರುವುದಿಲ್ಲ.

○ ಭಾರತೀಯ ನಾಗರೀಕರಾಗಿಲ್ಲದೇ ಇದ್ದಲ್ಲಿ

○ ನ್ಯಾಯಾಂಗ ಸೇವೆ ಅಥವಾ ಸರ್ಕಾರಿ ಅಥವಾ ಸ್ಥಳೀಯ ಸಂಸ್ಥೆಗಳ ಸೇವೆಯಿಂದ ಕಡ್ಡಾಯ ನಿವೃತ್ತಿಗೊಳಿಸಿದ್ದರೆ, ತೆಗೆದು ಹಾಕಲ್ಪಟ್ಟಿದ್ದರೆ ಅಥವಾ ವಜಾಗೊಳಿಸಲ್ಪಟ್ಟಿದ್ದರೆ ಅಥವಾ

ನ್ಯಾಯಾಧೀಶರಾಗಿ ಆಯ್ಕೆಯಾಗಿ ಪರಿವೀಕ್ಷಣಾ / ಪರೀಕ್ಷಾರ್ಥ ಅವಧಿಯಲ್ಲೇ ಸೇವೆಯಿಂದ ತೆಗೆದು ಹಾಕಲ್ಪಟ್ಟ ಅಭ್ಯರ್ಥಿಯಾಗಿದ್ದರೆ

- ಅನೈತಿಕ ಎಂದು ಪರಿಗಣಿಸಲ್ಪಡುವ ಅಪರಾಧಗಳಿಗೆ ಶಿಕ್ಷೆಗೆ ಒಳಗಾಗಿದ್ದಲ್ಲಿ ಅಥವಾ ಶಾಶ್ವತವಾಗಿ ಡಿಬಾರ್ ಆಗಿದ್ದರೆ ಅಥವಾ ಉಚ್ಚ ನ್ಯಾಯಾಲಯ ಅಥವಾ ಕೇಂದ್ರ ಲೋಕಸೇವಾ ಆಯೋಗ ಅಥವಾ ಯಾವುದೇ ರಾಜ್ಯ ಸೇವಾ ಆಯೋಗದಿಂದ ಪರೀಕ್ಷೆಗೆ ಹಾಜರಾಗಲು ಅನರ್ಹರಾಗಿದ್ದಲ್ಲಿ ಅಥವಾ ಯಾವುದೇ ಬಾರ್ ಕೌನ್ಸಿಲ್ ಸದಸ್ಯತ್ವದಿಂದ ತೆಗೆದು ಹಾಕಲ್ಪಟ್ಟಿದ್ದರೆ
- ಬಾರ್ ಕೌನ್ಸಿಲ್ ನಿಂದ ದಂಡ ಅಥವಾ ಶಿಕ್ಷೆ ವಿಧಿಸಲ್ಪಟ್ಟಿದ್ದರೆ ಅಥವಾ ಯಾವುದೇ ಶಿಸ್ತು ಪ್ರಾಧಿಕಾರದಿಂದ ನ್ಯಾಯಾಂಗ ಹುದ್ದೆಗೆ ಅನರ್ಹ ಎಂದು ನಿರ್ಧರಿಸಲ್ಪಟ್ಟಿದ್ದರೆ
- ನೇಮಕಾತಿ ಪ್ರಾಧಿಕಾರದ ಮೇಲೆ ನೇರವಾಗಿ ಅಥವಾ ಪರೋಕ್ಷವಾಗಿ ನೇಮಕಾತಿಗಾಗಿ ಒತ್ತಡ ಹೇರಿದಲ್ಲಿ
- ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಜೀವಂತ ಹೆಂಡತಿ ಇರುವ ವ್ಯಕ್ತಿಯನ್ನು ವಿವಾಹವಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದ ಪೂರ್ವಾನುಮತಿ ಇಲ್ಲದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

**ಸನ್ಮಾನ್ಯ ಅಧ್ಯಕ್ಷರ ಆದೇಶದ ಮೇರೆಗೆ**

**ಸಹಿ/–**

**ವಿಲೇಖನಾಧಿಕಾರಿ**

**ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ,**

**ಬೆಂಗಳೂರು.**